ಇ) ಇನ್ನು ಎಷ್ಟು ಅರ್ಜಿಗಳು ಬಾಕಿ ಉಳಿದಿವೆ ?

ಈ) ಹಾಗಿದ್ದಲ್ಲಿ ಈ ತಾರತಮ್ಯಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :-

ಅ) 24,224 ನಿವೇಶನಗಳನ್ನು ಹಂಚಲಾಗಿದೆ.

ಆ) 5,556 ನಿವೇಶನಗಳನ್ನು ಹಂಚಲಾಗಿದೆ.

ಇ) 86,988 ಅರ್ಜಿಗಳು ಬಾಕಿ ಉಳಿದಿವೆ.

ಈ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ನಿಯಮಾನುಸಾರ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಹಂಚಿಕೆ ನಿಯಮಾವಳಿ ಪ್ರಕಾರ ನಿವೇಶನಗಳನ್ನು ಹಂಚುವುದರಿಂದ ನಿವೇಶನ ಹಂಚಿಕೆಯಲ್ಲಿ ಯಾವ ತಾರತಮ್ಯ ಇರುವುದಿಲ್ಲ.

ವಿಷಯ :- ಕೋಲಾರ ಅಭಿವೃದ್ಧಿ ಪ್ರಾಧಿಕಾರಕ್ಕೆ ಮುಂಡಲ್ ಪಂಚಾಯ್ತಿ ವ್ಯಾಪ್ತಿಗೆ ಸೇರಿದ ಹಳ್ಳಿಗಳನ್ನು ಸೇರಿಸಿಕೊಂಡಿರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 639 (1003)

ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) :- ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೋಲಾರ ಅಭಿವೃದ್ಧಿ ಪ್ರಾಧಿಕಾರಕ್ಕೆ ಇತ್ತೀಚೆಗೆ ಮುಂಡಲ್ ಪಂಚಾಯ್ತಿ ವ್ಯಾಪ್ತಿಗೆ ಬರುವ 93 ಹಳ್ಳಿಗಳನ್ನು ಸೇರಿಸಿಕೊಳ್ಳಲಾಗಿದೆಯೇ ?

ಆ) ಹಾಗಿದ್ದಲ್ಲಿ, ಇದರ ಉದ್ದೇಶವೇನು ?

ಶ್ರೀ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :-

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ :- ಹಾಸನ ತಾಲ್ಲೂಕಿನಲ್ಲಿ ಕಪ್ಪು ಹಲಗೆ ಯೋಜನೆಯಲ್ಲಿ ಕಟ್ಟಿರುವ ಶಾಲೆಗಳ ಕಳಪೆ ಕಾಮಗಾರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 641 (710)

ಶ್ರೀ ಬಿ. ಶಿವರಾಮ್ (ಗೂಡಸೀ) :- ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಾಸನ ತಾಲ್ಲೂಕಿನ ರಾಯಪ್ಪರ ಕಟ್ಟಳ್ಳಿ ಮತ್ತು ಸಂಬದ ಕೊಪ್ಪಲುಗಳಲ್ಲಿ ಕಪ್ಪು ಹಲಗೆ ಯೋಜನೆಯಡಿಯಲ್ಲಿ ಕಟ್ಟಿರುವ ಕಟ್ಟಡಗಳ ಕಾಮಗಾರಿ ಕೆಲಸ ಸರಿಯಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸದರಿ ಕಟ್ಟಡಗಳಲ್ಲಿ ಶಾಲೆಗಳು ನಡೆಯುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು ?

ಶ್ರೀ ಎಂ. ವೀರಪ್ಪ ಮೊಯ್ಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :-

ಅ) ಹೌದು.

ಆ) ಈ ಕಟ್ಟಡಗಳಲ್ಲಿಯೆ ತರಗತಿಗಳನ್ನು ನಡೆಸಲಾಗುತ್ತಿದೆ.

ಇ) ಈ ಕುರಿತಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿದೆ. ಇದನ್ನು ಸರಿಪಡಿಸಲು ಕ್ರಮ ಮುಂದುವರಿಯುವುದು.